# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2014-15ನೇ ಸಾಲಿನ ಯೋಜನೆಯ ಅಭಿವೃದ್ಧಿ ಮತ್ತು
ಸಂಶೋಧನೆ ಕಾರ್ಯಕ್ರಮದ ಪ್ರಸ್ತಾವನೆಗೆ ಮಂಜೂರಾತಿ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ:ಕೃಇ/45/ಕೃಯೋಕಾ/ 2014, ದಿನಾಂಕ:11-04-2014.

2) ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: ಪಿ.ಎಲ್.ಎನ್/ತಾಂ-4 /ಆರ್&ಡಿ/ 2014-15, ದಿನಾಂಕ: 03-07-2014.

*******

**ಪ್ರಸ್ತಾವನೆ:**

ಮೇಲೆ ಓದಲಾದ ಉಲ್ಲೇಖ (1)ರಲ್ಲಿನ ಸರ್ಕಾರದ ಆದೇಶದಲ್ಲಿ 2013-14ನೇ ಸಾಲಿನಲ್ಲಿ ಕೃಷಿ ಇಲಾಖೆಯ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2014-15ನೇ ಸಾಲಿನಲ್ಲಿ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಕೃಷಿ ಆಯುಕ್ತರು ಸರ್ಕಾರಕ್ಕೆ ಸಲ್ಲಿಸಿರುವ ಮೇಲೆ ಓದಲಾದ (2)ರ ಪ್ರಸ್ತಾವನೆಯಲ್ಲಿ ಕೃಷಿ ನಿರ್ದೇಶನಾಲಯ ಯೋಜನೆಯಡಿ "ಯೋಜನೆ ಅಭಿವೃದ್ಧಿ ಮತ್ತು ಸಂಶೋಧನೆ ಕಾರ್ಯಕ್ರಮದ 2401-00-001-1-01 (ಯೋಜನೆ) ಕೃಷಿ ನಿರ್ದೇಶನಾಲಯ ಲೆಕ್ಕ ಶೀರ್ಷಿಕೆಯ 101 ಸಹಾಯಧನ ಉಪ ಶೀರ್ಷಿಕೆಯಡಿ ಒಟ್ಟು 747.50 ಲಕ್ಷಗಳ ಅನುದಾನವನ್ನು ಒದಗಿಸಿಕೊಳ್ಳಲಾಗಿದೆ ಎಂದು ತಿಳಿಸುತ್ತಾ, ಪ್ರಸಕ್ತ ಸಾಲಿನಲ್ಲಿ ರೈತರಿಗೆ ನೇರವಾಗಿ ಉಪಯುಕ್ತವಾಗುವಂತಹ ಅಲ್ಪಾವಧಿ ಸಂಶೋಧನಾ ಕಾರ್ಯಕ್ರಮಗಳನ್ನು ಕೈಗೊಳ್ಳಲು ರಾಜ್ಯದ ನಾಲ್ಕು ಕೃಷಿ ವಿಶ್ವವಿದ್ಯಾಲಯಗಳಿಂದ ಪ್ರಸ್ತಾವನೆಗಳನ್ನು ಪಡೆದು, ಪರಿಶೀಲಿಸಿರುತ್ತಾರೆ. ಸದರಿ ಸಂಶೋಧನಾ ಪ್ರಸ್ತಾವನೆಗಳನ್ನು ಆಯ್ಕೆ ಮಾಡುವ ಸಲುವಾಗಿ ರಚಿಸಲಾಗಿರುವ ಸಮಿತಿಯು ದಿ: 22-04-2014 ಮತ್ತು ದಿ: 05-05-2014 ರಂದು ಸಭೆ ಸೇರಿ ಪ್ರಸ್ತಾವನೆಗಳನ್ನು ಅಂತಿಮಗೊಳಿಸಿದೆ. ಸದರಿ ಸಮಿತಿಯ 2014-15ನೇ ಸಾಲಿನಲ್ಲಿ ಒಟ್ಟು 52 ಪ್ರಸ್ತಾವನೆಗಳನ್ನು ರೂ. 441.07 ಲಕ್ಷಗಳ ಅನುದಾನದಲ್ಲಿ ಕೈಗೊಳ್ಳಲು ತೀರ್ಮಾನಿಸಿದ್ದು, ಅದಕ್ಕಾಗಿ ಕೃಷಿ ವಿಶ್ವವಿದ್ಯಾಲಯಗಳಿಗೆ ಮೇಲ್ಕಂಡ ಲೆಕ್ಕ ಶೀರ್ಷಿಕೆಯಡಿ Grant-in-Bill ಮುಖಾಂತರ ಅನುದಾನ ಸೆಳೆಯಲು ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರ ಆದೇಶ ಸಂಖ್ಯೆ: ಕೃಇ/127/ಕೃಯೋಕಾ/2014 ಬೆಂಗಳೂರು, ದಿನಾಂಕ: 18-08-2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2014-15ನೇ ಸಾಲಿನಲ್ಲಿ ಕೃಷಿ ನಿರ್ದೇಶನಾಲಯ ಯೋಜನೆಯಡಿ "ಯೋಜನೆ ಅಭಿವೃದ್ಧಿ ಮತ್ತು ಸಂಶೋಧನೆ ಕಾರ್ಯಕ್ರಮದ 2401-00-001-1-01 (ಯೋಜನೆ) ಕೃಷಿ ನಿರ್ದೇಶನಾಲಯ ಲೆಕ್ಕ ಶೀರ್ಷಿಕೆಯ 101 ಸಹಾಯಧನ ಉಪ ಶೀರ್ಷಿಕೆಯಡಿ ಈ ಕೆಳಕಂಡ ರಾಜ್ಯದ ನಾಲ್ಕು ಕೃಷಿ ವಿಶ್ವವಿದ್ಯಾನಿಲಯಗಳಿಗೆ ಒಟ್ಟು 52 ಸಂಶೋಧನೆಗಳನ್ನು ಒಟ್ಟು ರೂ.441.07 ಲಕ್ಷಗಳಲ್ಲಿ ಕೈಗೊಳ್ಳಲು ಮಂಜೂರಾತಿ ನೀಡಿ ಆದೇಶಿಸಿದೆ.

| ಕ್ರ. ಸಂ | ಕೃಷಿ ವಿಶ್ವವಿದ್ಯಾಲಯ | ಸಂಶೋಧನಾ ಪ್ರಸ್ತಾವನೆಗಳ ಸಂಖ್ಯೆ | ಅನುದಾನ (ರೂ. ಲಕ್ಷಗಳಲ್ಲಿ) |
|---|---|---|---|
| 1 | ಕೃಷಿ ವಿಶ್ವವಿದ್ಯಾಲಯ ಬೆಂಗಳೂರು. | 10 | 98.87 |
| 2 | ಕೃಷಿ ವಿಶ್ವವಿದ್ಯಾಲಯ ಧಾರವಾಡ. | 11 | 154.00 |
| 3 | ಕೃಷಿ ವಿಶ್ವವಿದ್ಯಾಲಯ ರಾಯಚೂರು. | 24 | 135.40 |
| 4 | ಕೃಷಿ ಮತ್ತು ತೋಟಗಾರಿಕಾ ವಿಶ್ವವಿದ್ಯಾಲಯ ಶಿವಮೊಗ್ಗ | 7 | 52.80 |
| | ಒಟ್ಟು | 52 | 441.07 |

ಸದರಿ ವಿಷಯದಲ್ಲಿ ಮೇಲ್ಕಂಡ ಕೃಷಿ ವಿಶ್ವವಿದ್ಯಾಲಯಗಳು ಸಲ್ಲಿಸುವ Grant-in-Aid ಬಿಲ್ಲುಗಳಿಗೆ ಮೇಲು ಸಹಿ ಮಾಡುವ ಅಧಿಕಾರ ಕೃಷಿ ನಿರ್ದೇಶಕರಿಗೆ ನೀಡಲಾಗಿದೆ.

ಸದರಿ ಅನುದಾನವನ್ನು ಕೃಷಿ ನಿರ್ದೇಶನಾಲಯ ಯೋಜನೆಯಡಿ ಯೋಜನೆಯ ಅಭಿವೃದ್ಧಿ ಮತ್ತು ಸಂಶೋದನೆ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2401-00-001-1-01 ಅಡಿ" ಉಪ ಲೆಕ್ಕ ಶೀರ್ಷಿಕ 101 (ಸಹಾಯಾನುಧಾನ) ದಲ್ಲಿ ಬಿಡುಗಡೆ ಮಾಡಿದ ಅನುದಾನದಲ್ಲಿ ಭರಿಸತಕ್ಕದ್ದು.

ಮುಂದುವರೆದು, ರಾಜ್ಯದ ಎಲ್ಲಾ ಕೃಷಿ ವಿಶ್ವವಿದ್ಯಾಲಯಗಳಲ್ಲಿ ಯೋಜನಾ ಅಭಿವೃದ್ಧಿ ಮತ್ತು ಸಂಶೋಧನಾ ಕಾರ್ಯಕ್ರಮದಲ್ಲಿ ಕಳೆದ 5 ವರ್ಷದಲ್ಲಿ ಕೈಗೊಂಡ ಸಂಶೋಧನಾ ವಿವರಗಳನ್ನು ಹಾಗೂ ಸದರಿ ಸಂಶೋಧನೆ ರೈತರಿಗೆ ಫಲಶ್ರುತಿಯಾದ ಬಗ್ಗೆ ಕೃಷಿ ಆಯುಕ್ತರು ತಮ್ಮ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯಲ್ಲಿ ಪರಿಶೀಲಿಸಿ, ಸರ್ಕಾರಕ್ಕೆ ಸವಿಸ್ತಾರವಾದ ವರದಿಯನ್ನು ನೀಡುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜ್ಯೋತಿ.ಆರ್.ಜೆ),
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ) ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ) ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು-01.
4. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು / ಧಾರವಾಡ / ರಾಯಚೂರು.
5. ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ, ವಿಶ್ವವಿದ್ಯಾನಿಲಯ ಶಿವಮೊಗ್ಗ.
6. ಕೃಷಿ ಆಯುಕ್ತರು / ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ. ಟವರ್, ಬೆಂಗಳೂರು.
8. ಸಂಶೋಧನಾ ನಿರ್ದೇಶಕರು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ/ ರಾಯಚೂರು/ಶಿವಮೊಗ್ಗ.
9. ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ.
10. ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ.
11. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-4, ವಿಧಾನಸೌಧ, ಬೆಂಗಳೂರು.
13. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಮಾಹಿತಿಗಾಗಿ ಪ್ರತಿ.</u>

1. ಮಾನ್ಯ ಕೃಷಿ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ-1ರವರ ಆಪ್ತ ಸಹಾಯಕರು, ಕೃಷಿ ಇಲಾಖೆ, ಬೆಂಗಳೂರು